ರುಚಿಕರವಾದ ಉಪಹಾರ
ಸಿಹಿ – ಖಾರ ತಿಂಡಿಗಳು
ನ್ಯೂ ಕೋರ್ಟ್ ರೆಸ್ಟೋರೆಂಟ್
ಹೊಸ ಬಸ್‌ಸ್ಟ್ಯಾಂಡ್ ಬಳಿ
ಕುಂದಾಪುರ
ಫೋ : 232878

www.kundaprabha.com e-mail : kundaprabha@gmail.com

# ಕುಂದಪ್ರಭ

ವಾರಪತ್ರಿಕೆ

ಸ್ಥಾಪನೆ : 1948
6 ದಶಕಗಳ ವಿಶ್ವಾಸನೀಯ ಸೇವೆಯಲ್ಲಿ
ಶೇಟ್ ಜ್ಯುವೆಲ್ಲರ್ಸ್
ಶಂಕರ್ ಶೇಟ್ ಬಿಲ್ಡಿಂಗ್
ಮುಖ್ಯರಸ್ತೆ, ಕುಂದಾಪುರ
ಫೋನ್ : 230242

॥ ಸಂಪುಟ : 28 ॥ ಸಂಚಿಕೆ : 35॥ UDP/1263/2018-20 || R.NO.50495/91 ॥ ತಾರೀಕು : 09–10–2018 ॥ ರೂ 5/– ॥ ವಾರ್ಷಿಕ ಚಂದಾ : 300/– ಅಂಚೆಯಲ್ಲಿ : 400/

# ತ್ರಾಸಿಯಲ್ಲಿ ಬೃಹತ್ ಜನಜಾಗೃತಿ ಜಾಥಾ



ಹಳ್ಳಿಗಳು ರಾಮರಾಜ್ಯವಾದರೆ ದೇಶ ಸುಭದ್ರವಾಗಿ ಬೆಳೆಯಲಿದೆ . ಹಳ್ಳಿಗಳು ಸುಭಿಕ್ಷೆ ಹೊಂದಿದರೆ ಮಾತ್ರ ದೇಶದ ಪ್ರಗತಿ ಸಾಧ್ಯ ಎಂಬುದನ್ನು ಮಹಾತ್ಮಾ ಗಾಂಧೀಜಿಯವರು ಮನಗಂಡಿದ್ದರು. ಗಾಂಧೀಜಿಯವರು ಮದ್ಯಪಾನ ನಿಷೇಧದ ಬಗ್ಗೆ ಹೆಚ್ಚಿನ ಒಲವು ಹೊಂದಿದ್ದು, ಸರಕಾರಗಳು ಗಾಂಧೀಜಿಯವರ ಮದ್ಯಪಾನ ನಿಷೇಧ ಜಾರಿಗೊಳಿಸುವ ಕಾರ್ಯಕ್ರಮಗಳನ್ನು ಸರಿಯಾದ ನಿಟ್ಟಿನಲ್ಲಿ ಕಾರ್ಯರೂಪಕ್ಕೆ ತರುತ್ತಿಲ್ಲ. ಪ್ರತಿ ಹಳ್ಳಿಗಳಲ್ಲಿರುವ ಮದ್ಯದಂಗಡಿಗಳಿಗೆ ಮದ್ಯ ಮಾರಾಟಕ್ಕೆ ಗುರಿ ನಿಗದಿಪಡಿಸುತ್ತಿರುವ ಸರಕಾರದಿಂದ ಮಹಾತ್ಮಾ ಗಾಂಧೀಜಿಯವರ ಕನಸಿನ ದೇಶ ಕಟ್ಟಲು ಸಾಧ್ಯವಿದೆಯೇ ಎಂದು ಬೈಂದೂರು ಶಾಸಕ ಬಿ.ಎಂ.ಸುಕುಮಾರ ಶೆಟ್ಟಿ ಅಭಿಪ್ರಾಯಪಟ್ಟರು.

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಕುಂದಾಪುರ ತಾಲೂಕು, ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆ ಬೆಳ್ತಂಗಡಿ, ಜಿಲ್ಲಾ ಜನಜಾಗೃತಿ ವೇದಿಕೆ ಉಡುಪಿ, ತಾಲೂಕು ಜನಜಾಗೃತಿ ವೇದಿಕೆ ಕುಂದಾಪುರ, ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ ಬೆಂಗಳೂರು ಇವರ ಜಂಟಿ ಸಹಯೋಗದೊಂದಿಗೆ ತ್ರಾಸಿಯ ಕೊಂಕಣಿ ಖಾರ್ವಿ ಸಮುದಾಯ ಭವನದಲ್ಲಿ ಭಾನುವಾರ ಜರಗಿದ 150ನೇ ಗಾಂಧಿ ಜಯಂತಿ ಸಂಭ್ರಮಾಚರಣೆಯ ಪ್ರಯುಕ್ತ ಜನಜಾಗೃತಿ ಜಾಥಾ ಮತ್ತು ಗಾಂಧಿ ಸ್ಮೃತಿ ವಿಚಾರ ಸಂಕಿರಣವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ದೇಶದ ಪ್ರಧಾನಮಂತ್ರಿಯವರು ಸ್ವಚ್ಛ ಭಾರತ ಯೋಜನೆಗೆ ಚಾಲನೆ ನೀಡಿದ್ದು, ದೇಶದ ಪ್ರತಿಯೊಬ್ಬ ಪ್ರಜೆಯೂ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳುವ ಜೊತೆಗೆ ತನ್ನ ಪ್ರತಿಯೊಂದು ಅಂಗಾಂಗವನ್ನು ಸ್ವಚ್ಛವಾಗಿಟ್ಟುಕೊಂಡಾಗ ಸ್ವಚ್ಛಭಾರತದ ನಿಲುವು ಸಾರ್ಥಕತೆಯನ್ನು ಪಡೆದುಕೊಳ್ಳಲಿದೆ. ನರೇಂದ್ರ ಮೋದಿಯವರು ಹಳ್ಳಿಗಳ ಅಭಿವೃದ್ಧಿ ಮತ್ತು ಗ್ರಾಮೀಣ ಪ್ರದೇಶದ ಜನರ ಕಲ್ಯಾಣಕ್ಕಾಗಿ ಶ್ರಮಿಸುವ ಮೂಲಕ ಗಾಂಧೀಜಿಯವರ ಕನಸನ್ನು ನನಸು ಮಾಡಲು ಪ್ರಯತ್ನಿಸುತ್ತಿದ್ದಾರೆ. ಹೊಸತನವನ್ನು ಸಮಾಜಕ್ಕೆ ನೀಡುವ ಕೆಲಸ ನಡೆಯಬೇಕು. ಜೀವನದಲ್ಲಿ ಸಾಧನೆ ಮಾಡಿ ಸಂಸ್ಕಾರಯುತ, ಶಾಂತಿಯುತ ಮತ್ತು ಸೌಹಾರ್ದಯುತ ಸಮಾಜ ಕಟ್ಟುವ ಗಾಂಧೀಜಿಯವರ ಕನಸನ್ನು ನನಸು ಮಾಡಲು ಎಲ್ಲರೂ ಕೈಜೋಡಿಸಬೇಕು. ಡಾ.ಡಿ.ವೀರೇಂದ್ರ ಹೆಗ್ಗಡೆಯವರ ದೂರದೃಷ್ಟಿತ್ವದ ಫಲವಾಗಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಮೂಲಕ ಜನರು ಲವಲವಿಕೆಯಿಂದ ಆಶಾದಾಯಕ ಜೀವನ ನಡೆಸುವಂತಾಗಿದೆ ಎಂದು ಹೇಳಿದರು.

ಕುಂದಾಪುರ ತಾಲೂಕು ಜನಜಾಗೃತಿ ವೇದಿಕೆ ಅಧ್ಯಕ್ಷ ಬಿ.ಅಪ್ಪಣ್ಣ ಹೆಗ್ಡೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಉಡುಪಿ ಜಿಲ್ಲಾ ಜನಜಾಗೃತಿ ವೇದಿಕೆ ಅಧ್ಯಕ್ಷ ನವೀನ್ ಅಮೀನ್ ಜಾಥಾ ಉದ್ಘಾಟಿಸಿದರು. ಸಾಹಿತಿ ಕೋ.ಶಿವಾನಂದ ಕಾರಂತ್ ದಿಕ್ಸೂಚಿ ಭಾಷಣ ಮಾಡಿ ಪರಿಸರ ಸ್ವಚ್ಛತೆ ಜೊತೆಗೆ ಮನಸ್ಸಿನ ಸ್ವಚ್ಛತೆಗೂ ನಾವು ಮುಂದಾಗಬೇಕಾಗಿದೆ ಎಂದರು. ಯೋಜನೆಯ ಜಿಲ್ಲಾ ನಿರ್ದೇಶಕ ಪುರುಷೋತ್ತಮ ಪಿ.ಕೆ., ಜಿಪಂ ಸದಸ್ಯೆ ಶೋಭಾ ಜಿ.ಪುತ್ರನ್, ತಾಪಂ ಸದಸ್ಯರಾದ ನಾರಾಯಣ ಕೆ.ಗುಜ್ಜಾಡಿ, ಶ್ಯಾಮಲಾ ಎಸ್.ಕುಂದರ್, ತ್ರಾಸಿ ಗ್ರಾಪಂ ಅಧ್ಯಕ್ಷ ರಾಜು ದೇವಾಡಿಗ, ಹೊಸಾಡು ಗ್ರಾಪಂ ಅಧ್ಯಕ್ಷ ಚಂದ್ರಶೇಖರ ಪೂಜಾರಿ, ಗಂಗೊಳ್ಳಿ ವಲಯ ನಾಡದೋಣಿ ಮೀನುಗಾರರ ಸಂಘದ ಅಧ್ಯಕ್ಷ ಎಚ್.ಮಂಜು ಬಿಲ್ಲವ, ತ್ರಾಸಿ ವಲಯ ಜನಜಾಗೃತಿ ವೇದಿಕೆ ಅಧ್ಯಕ್ಷ ರಾಜು ದೇವಾಡಿಗ, ಪ್ರಗತಿಬಂಧು ಸ್ವಸಹಾಯ ಸಂಘಗಳ ಒಕ್ಕೂಟದ ಕೇಂದ್ರ ಸಮಿತಿ ಅಧ್ಯಕ್ಷ ಎಚ್.ಎಂ.ಕೃಷ್ಣ ಪೂಜಾರಿ, ಗಂಗೊಳ್ಳಿ ಪೊಲೀಸ್ ಠಾಣಾ ಉಪನಿರೀಕ್ಷಕ ವಾಸಪ್ಪ ನಾಯ್ಕ್, ಕಂಬದಕೋಣೆ ವ್ಯವಸಾಯ ಸಹಕಾರಿ ಸಂಘದ ಅಧ್ಯಕ್ಷ ಪ್ರಕಾಶ್ಚಂದ್ರ ಶೆಟ್ಟಿ, ನವೀನಚಂದ್ರ ಶೆಟ್ಟಿ ರಟ್ಟಾಡಿ, ನವೀನಚಂದ್ರ ಉಪ್ಪುಂದ, ತ್ಯಾಂಪಣ್ಣ ಶೆಟ್ಟಿ, ಬಸವರಾಜ್ ಶೆಟ್ಟಿಗಾರ್, ನರಸಿಂಹ ದೇವಾಡಿಗ, ಕೆ.ಎಸ್.ಮಡಿವಾಳ ಮತ್ತಿತರರು ಉಪಸ್ಥಿತರಿದ್ದರು.

ಪಾನಮುಕ್ತರಾದ ಜಯರಾಮ ಪೂಜಾರಿ ಹಳ್ಳಿಹೊಳೆ ಮತ್ತು ಮಹಾಬಲೇಶ್ವರ ಆಚಾರ್ಯ ಉಳ್ಳೂರು ಅನಿಸಿಕೆ ವ್ಯಕ್ತಪಡಿಸಿದರು. ಭಾಷಣ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.

ಯೋಜನೆಯ ಬೈಂದೂರು ತಾಲೂಕು ಯೋಜನಾಧಿಕಾರಿ ಶಶಿರೇಖಾ ಪಿ. ಸ್ವಾಗತಿಸಿದರು. ಕೃಷಿ ಅಧಿಕಾರಿ ಚೇತನ್ ಕುಮಾರ್ ಮತ್ತು ಮೇಲ್ವಿಚಾರಕಿ ಪ್ರೇಮಾ ಕಾರ್ಯಕ್ರಮ ನಿರೂಪಿಸಿದರು. ಕುಂದಾಪುರ ತಾಲೂಕು ಯೋಜನಾಧಿಕಾರಿ ಕೆ.ಮುರಳೀಧರ ಶೆಟ್ಟಿ ವಂದಿಸಿದರು. ಕಾರ್ಯಕ್ರಮಕ್ಕೂ ಮುನ್ನ ತ್ರಾಸಿ ಬೀಚ್ ಬಳಿಯಿಂದ ಸಮುದಾಯ ಭವನದವರೆಗೆ ವಿವಿಧ ಸ್ತಬ್ಧಚಿತ್ರಗಳನ್ನೊಳಗೊಂಡ ಆಕರ್ಷಕ ಜಾಥಾ ನಡೆಯಿತು.

## ಕೊಂಕಣಿ ವಿದ್ಯಾರ್ಥಿ ಸಮ್ಮೇಳನ "ಪಾವ್ಸ್"

# ಹಿರಿಯರ ಮಾರ್ಗದರ್ಶನ, ಕಿರಿಯರಿಗೆ ಶಕ್ತಿ



ನಮ್ಮ ಹಿರಿಯರು ಸಾವಿರಾರು ವರ್ಷಗಳಿಂದ ಕಾಪಾಡಿಕೊಂಡು ಬಂದ ಮಾತೃಭಾಷೆ, ಸಾಹಿತ್ಯ, ಸಂಸ್ಕೃತಿ ಮಹತ್ವವಾದುದು. ಕಷ್ಟನಷ್ಟಗಳನ್ನು ಎದುರಿಸಿಯೂ ನಮ್ಮತನ ಅವರು ಬಿಡಲಿಲ್ಲ. ದೇವರಲ್ಲಿ ಶ್ರದ್ದೆ, ಕರ್ತವ್ಯದಲ್ಲಿ ಪ್ರಾಮಾಣಿಕತೆ, ಮಾತೃಭಾಷೆಯ ಬಗ್ಗೆ ಪ್ರೀತಿ ಹಾಗೂ ಶ್ರಮ ಅವರನ್ನು ಮುನ್ನಡೆಸಿತು. ಕೊಂಕಣಿ ಮಾತೃಭಾಷೆಗೆ ರಾಜ್ಯಗಳಿಂದ, ಭಾರತ ಸರಕಾರದಿಂದ ಮಾನ್ಯತೆ ಪಡೆಯಲು ದಶಕಗಳ ಕಾಲ ನಡೆಸಿದ ಹೋರಾಟದ ಫಲ ಇಂದು ನಮಗೆ ದೊರಕುತ್ತಿದೆ. ಹಿರಿಯರ ಮಾರ್ಗದರ್ಶನ ಕಿರಿಯರಿಗೆ ಶಕ್ತಿ ಇದ್ದ ಹಾಗೆ. ಅದರ ಪ್ರಯೋಜನ ವಿದ್ಯಾರ್ಥಿಗಳು ಪಡೆಯಬೇಕು" ಎಂದು ಹಿರಿಯ ಸಾಮಾಜಿಕ ಧುರೀಣ, ಮಂಗಳೂರು ಗೇರು ಬೀಜ ಕಾರ್ಖಾನೆಯ ಆಡಳಿತ ಪಾಲುದಾರ ಡಿ.ಗೋಪಾಲಕೃಷ್ಣ ಕಾಮತ್ ಹೇಳಿದರು.

ಜೈಕೊಂಕಣಿ (ರಿ) ಆಶ್ರಯದಲ್ಲಿ ಕುಂದಾಪುರದ ಸರಕಾರಿ ಪ.ಪೂ.ಕಾಲೇಜಿನ ರೋಟರಿ ಲಕ್ಷ್ಮೀ ನರಸಿಂಹ ಕಲಾಮಂದಿರದಲ್ಲಿ ನಡೆದ ಕೊಂಕಣಿ ವಿದ್ಯಾರ್ಥಿ ಸಮ್ಮೇಳನ "ಪಾವ್ಸ್" ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

"ನಾವು ಸಣ್ಣವರಿದ್ದಾಗ ನಮಗೆ ಇಂತಹ ಅವಕಾಶಗಳು ಇರಲಿಲ್ಲ. ಇಂದು ಉತ್ತಮ ಅವಕಾಶಗಳು ವಿದ್ಯಾರ್ಥಿಗಳಿಗೆ ದೊರಕುತ್ತಿವೆ. ವಿದ್ಯಾರ್ಥಿಗಳು ತಮ್ಮ ಪ್ರತಿಭೆಯನ್ನು ಉಜ್ವಲಗೊಳಿಸಲು ಇದು ಸಹಕಾರಿ. ನಾವು ಎಲ್ಲ ಭಾಷೆಗಳನ್ನು ಕಲಿಯೋಣ, ಮಾತೃಭಾಷೆಯನ್ನು ಮರೆಯದಿರೋಣ" ಎಂದರು.

ಸಮಾರಂಭದ ಅಧ್ಯಕ್ಷತೆಯನ್ನು ಶೇಟ್ ಜ್ಯುವೆಲ್ಲರ್ಸ್ ಮಾಲಕ ಬಿ.ಸುಧೀಂದ್ರ ಶೇಟ್ ವಹಿಸಿದ್ದರು.

ಜಾಗಟೆ ಬಾರಿಸಿ ಸಮ್ಮೇಳನಕ್ಕೆ ಚಾಲನೆ ನೀಡಿದ ಡಾ.ಬಿ.ಬಿ. ಹೆಗ್ಡೆ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿ" ಅನಂತ ನಾಯಕ್" ಮಳೆ ಹೇಗೆ ಭೂಮಿಯಲ್ಲಿ ನಿರಂತರವಾಗಿರುತ್ತದೋ, ಕೊಂಕಣಿ ಭಾಷೆಯೂ ನಿರಂತರವಾಗಿರುತ್ತದೆ. ಬಿಸಿಲು ಮಳೆಯ ಸಂಬಂಧ ಅರಿತು ನಾವು ಜೀವನ ನಡೆಸಬೇಕು. ಮಳೆ ಹೇಗೆ ನಮಗೆ ಅನಿವಾರ್ಯವೋ . ಮಾತೃಭಾಷೆಯೂ ಅನಿವಾರ್ಯ. ಮಳೆ ನೀರು ಭೂಮಿಯನ್ನು ಫಲವತ್ತಾಗಿಸಿದಂತೆ ಮಾತೃಭಾಷೆ ನಮ್ಮ

(7ನೇ ಪುಟಕ್ಕೆ)

ಕುಂದಾಪುರದಲ್ಲಿ 5 ದಶಕಗಳಿಂದ ನಿರಂತರ ಸೇವೆಯಲ್ಲಿರುವ
ವಸಂತ ಬೇಕರಿ
ಗ್ರಾಹಕರ ಅನುಕೂಲತೆಗಾಗಿ ಅತ್ಯಂತ ಸುಸಜ್ಜಿತವಾಗಿ ಇನ್ನೊಂದು ನೂತನ ಮಾರಾಟ ಕೇಂದ್ರವನ್ನು ಪ್ರಾರಂಭಿಸಲಾಗಿದೆ.
ಕಾರ್ಪೋರೇಶನ್ ಬ್ಯಾಂಕ್ ಬಳಿ, ಮುಖ್ಯ ರಸ್ತೆ, ಕುಂದಾಪುರ
ಫೋನ್ : 08254–230503, ಮೊ: 9448171188

